All India Radio: Bangalore
National Bulletin In Kannada
14.11.2025 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

೧. ಭಾರಿ ಕುತೂಹಲ ಕೆರಳಿಸಿರುವ ಬಿಹಾರ ವಿಧಾನಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ಇಂದು

೨. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ಆಂಧ್ರಪ್ರದೇಶಕ್ಕೆ ಭೇಟಿ; ೩೦ನೇ ಭಾರತೀಯ ಕೈಗಾರಿಕಾ ಒಕ್ಕೂಟದ ಪಾಲುದಾರಿಕೆ ಶೃಂಗಸಭೆಯಲ್ಲಿ ಭಾಗಿ

೩. ಬಂದರುಗಳಿಂದ ೨೦೪೭ರ ವೇಳೆಗೆ ೧೦ ಸಾವಿರ ಮಿಲಿಯನ್ ಮೆಟ್ರಿಕ್ ಟನ್ ಸರಕು ನಿರ್ವಹಣೆ ಗುರಿ- ಸಚಿವ ಸರ್ಬಾನಂದ ಸೋನೋವಾಲ್.

೪. ಇಂದಿನಿಂದ ಭಾರತ - ಪ್ರವಾಸಿ ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ಅರಂಭ.

<><><><>

ಇಡೀ ದೇಶದ ಗಮನ ಸೆಳೆದಿರುವ ಬಿಹಾರ ವಿಧಾನಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ಇಂದು ನಡೆಯಲಿದೆ. ಬಿಹಾರದ ೩೮ ಜಿಲ್ಲೆಗಳ ೪೬ ಮತ ಎಣಿಕೆ ಕೇಂದ್ರಗಳಲ್ಲಿ ಎಣಿಕೆ ಕಾರ್ಯ ನಡೆಯಲಿದೆ. ಮತಗಟ್ಟೆಗಳಿಂದ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧರಿಸುವ ವಿದ್ಯುನ್ಮಾನ ಮತಯಂತ್ರಗಳನ್ನು ಬಾರಿ ಬಿಗಿ ಭದ್ರತೆಯಲ್ಲಿ ಸ್ಟ್ರಾಂಗ್ ರೂಂಗಳಲ್ಲಿ ಇಡಲಾಗಿದ್ದು, ಅವುಗಳ ಸುತ್ತ ಮೂರು ಹಂತದ ಭದ್ರತಾ ವ್ಯವಸ್ಥೆಯನ್ನು ಕೈಗೊಳ್ಳಲಾಗಿದೆ. ರಾಜ್ಯ ಪೊಲೀಸರ ಜೊತೆಗೆ ಕೇಂದ್ರೀಯ ಸಶಸ್ತ್ರ ಮೀಸಲು ಪೊಲೀಸ್ ಪಡೆಗಳು ಭದ್ರತೆ ಹೊಣೆಯನ್ನು ಹೊತ್ತಿವೆ. ಮತ ಎಣಿಕೆ ಕೇಂದ್ರಗಳ ಸುತ್ತ ಸಿಸಿಟಿವಿ ಅಳವಡಿಸಿ ನಿಯಂತ್ರಣ ಕೊಠಡಿಗಳನ್ನು ತೆರೆದು ನಿಗಾ ವಹಿಸಲಾಗುತ್ತದೆ. ಅರ್ಜಿ ನಮೂನೆ ೧೭-ಸಿ ಮತ್ತು ಇವಿಎಂ ದತ್ತಾಂಶದ ನಡುವೆ ಹೊಂದಣಿಕೆಯಾಗದಿದ್ದರೆ ವಿವಿಪ್ಯಾಟ್ ಎಣಿಕೆ ಕಡ್ಡಾಯ ಎಂದು ಚುನಾವಣಾ ಆಯೋಗ ಹೇಳಿದೆ. ೨೪೩ ಕ್ಷೇತ್ರಗಳಿಗೆ ನವೆಂಬರ್ ೬ ಮತ್ತು ೧೧ ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಿತು. ಈ ಚುನಾವಣೆಯಲ್ಲಿ, ಬಿಹಾರವು ೧೯೫೧ ರಿಂದೀಚೆಗೆ ಶೇ. ೬೭.೧೩ ರಷ್ಟು ಅತಿ ಹೆಚ್ಚು ಮತದಾನವನ್ನು ದಾಖಲಿಸಿದೆ. ಎರಡು ಸಾವಿರದ ೬೧೬ ಅಭ್ಯರ್ಥಿಗಳ ಚುನಾವಣಾ

ಭವಿಷ್ಯವನ್ನು ಮೊಹರು ಮಾಡಲಾಗಿರುವ ಎಲೆಕ್ಟ್ರಾನಿಕ್ ಮತ ಯಂತ್ರಗಳನ್ನು ಸ್ಟ್ರಾಂಗ್ ರೂಮ್‌ಗಳಲ್ಲಿ ಬಿಗಿ ಭದ್ರತೆಯಲ್ಲಿ ಇರಿಸಲಾಗಿದೆ. ಬೆಳಗ್ಗೆ ೮ ಗಂಟೆಗೆ ಮತ ಎಣಿಕೆ ಕಾರ್ಯ ಆರಂಭವಾಗಲಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ ವಿನೋದ್ ಸಿಂಗ್ ಗುಂಜಿಯಾಲ್, ಮತದಾನದಲ್ಲಿ ಬಳಸಲಾದ ಇವಿಎಂಗಳು ಮತ್ತು ವಿವಿಪ್ಯಾಟ್‌ಗಳನ್ನು ಮೂರು ಹಂತದ ಭದ್ರತಾ ವ್ಯವಸ್ಥೆಯ ಅಡಿಯಲ್ಲಿ ಸ್ಟ್ರಾಂಗ್ ರೂಮ್‌ಗಳಲ್ಲಿ ಮೊಹರು ಮಾಡಲಾಗಿದೆ. ಎಲ್ಲಾ ಎಣಿಕೆ ಕೇಂದ್ರಗಳಲ್ಲಿ ವಿಸ್ತಾರವಾದ ಭದ್ರತಾ ವ್ಯವಸ್ಥೆಗಳು ಜಾರಿಯಲ್ಲಿವೆ ಎಂದು ಅವರು ಹೇಳಿದರು.

ಬೈಟ್-ವಿನೋದ್ ಸಿಂಗ್ ಗುಂಜಿಯಾಲ್ (೧೮ ಸೆಕೆಂಡ್)

<><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಆಂಧ್ರಪ್ರದೇಶಕ್ಕೆ ಭೇಟಿ ನೀಡಲಿದ್ದು, ವಿಶಾಖಪಟ್ಟಣದಲ್ಲಿನಡೆಯಲಿರುವ ೩೦ನೇ ಭಾರತೀಯ ಕೈಗಾರಿಕಾ ಒಕ್ಕೂಟ-ಸಿಐಐ ಪಾಲುದಾರಿಕೆ ಶೃಂಗಸಭೆಯ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಎರಡು ದಿನಗಳ ಕಾಲ ನಡೆಯಲಿರುವ ಈ ಶೃಂಗಸಭೆಯನ್ನು ಕೈಗಾರಿಕೆ ಮತ್ತು ಆಂತರಿಕ ವ್ಯಾಪಾರ ಉತ್ತೇಜನ ಇಲಾಖೆ ಹಾಗೂ ಆಂಧ್ರಪ್ರದೇಶ ಸರಕಾರದ ಸಹಭಾಗಿತ್ವದಲ್ಲಿಸಿಐಐ ವತಿಯಿಂದ ಆಯೋಜಿಸಲಾಗಿದೆ. ಈ ಶೃಂಗಸಭೆಯು ವ್ಯಾಪಾರ ಮತ್ತು ಹೂಡಿಕೆಯ ಭವಿಷ್ಯವನ್ನು ರೂಪಿಸಲು ಚಿಂತಕರು, ನೀತಿ ನಿರೂಪಕರು, ಉದ್ಯಮ ನಾಯಕರು ಹಾಗೂ ಜಾಗತಿಕ ಪಾಲುದಾರರನ್ನು ಒಟ್ಟುಗೂಡಿಸುವ ನಿರೀಕ್ಷೆಯಿದೆ. ಈ ಕಾರ್ಯಕ್ರಮದಲ್ಲಿ೪೫ ಅಧಿವೇಶನಗಳು ನಡೆಯಲಿದ್ದು, ೭೨ ಅಂತಾರಾಷ್ಟ್ರೀಯ ಭಾಷಣಕಾರರು ಪಾಲ್ಗೊಳ್ಳಿದ್ದಾರೆ. ೪೫ ದೇಶಗಳ ೨೦೦ ಪ್ರತಿನಿಧಿಗಳು ಸೇರಿದಂತೆ ಎರಡು ಸಾವಿರದ ೫೦೦ ಪ್ರತಿನಿಧಿಗಳು ಈ ಶೃಂಗ ಸಭೆಯಲ್ಲಿಉಪಸ್ಥಿತರಿರುವರು. "ತಂತ್ರಜ್ಞಾನ, ನಂಬಿಕೆ ಮತ್ತು ವ್ಯಾಪಾರ: ಹೊಸ ಭೂ-ಆರ್ಥಿಕ ಕ್ರಮದಲ್ಲಿಸಾಗುವುದು" ಈ ಶೃಂಗಸಭೆಯ ವಿಷಯವಾಗಿದೆ.

<><><>

ದೇಶ ೨೦೪೭ ರ ವೇಳೆಗೆ ವಿಕಸಿತ ಭಾರತವಾಗಿ ಪರಿವರ್ತನೆಗೊಳ್ಳುತ್ತಿದ್ದು, ಈ ಅಭಿವೃದ್ಧಿ ಪಯಣದಲ್ಲಿ ಅನಿವಾಸಿ ಭಾರತೀಯರ ಪಾತ್ರವೂ ಅತ್ಯಂತ ಮಹತ್ವದ್ದಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಅವರು ಬೋಟ್ಸ್ವಾನದಲ್ಲಿ ನಿನ್ನೆ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿ, ಅನಿವಾಸಿ ಭಾರತೀಯರ ಸಾಧನೆಗಳ ಬಗ್ಗೆ ಭಾರತಕ್ಕೆ ಹೆಮ್ಮೆ ಇದೆ. ಅವರ ಯಶಸ್ಸು ಭಾರತದ ಘನತೆಯನ್ನು ಹೆಚ್ಚಿಸಿದೆ. ಅದೇ ರೀತಿ ಅನಿವಾಸಿ ಭಾರತೀಯ

ಸಮುದಾಯ ಭಾರತ-ಬೋಟ್ಸ್ವಾನ ಸಂಬಂಧಗಳ ವೃದ್ಧಿಗೂ ಕೊಡುಗೆ ನೀಡಬೇಕೆಂದರು. ಎರಡೂ ದೇಶಗಳ ನಡುವಿನ ಸಂಬಂಧಗಳಿಗೆ ಅನಿವಾಸಿ ಭಾರತೀಯರು ಜೀವಂತ ಸೇತುವೆಯಾಗಿದ್ದಾರೆ. ಅವರು ಬೋಟ್ಸ್ವಾನದ ಆರ್ಥಿಕ ಪ್ರಗತಿ ಮತ್ತು ಉದ್ಯೋಗ ಸೃಷ್ಟಿಗೆ ಒತ್ತು ನೀಡಿದ್ದಾರೆ ಎಂದು ಹೇಳಿದರು.

<><><>

ದೇಶದ ಎಲ್ಲಾ ಬಂದರುಗಳಿಂದ ೨೦೪೭ರ ವೇಳೆಗೆ ಒಟ್ಟು ೧೦ ಸಾವಿರ ಮಿಲಿಯನ್ ಮೆಟ್ರಿಕ್ ಟನ್ ಸರಕು ನಿರ್ವಹಣೆಯ ಗುರಿ ಹೊಂದಲಾಗಿದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ. ನಿನ್ನೆ ನವ ಮಂಗಳೂರು ಬಂದರು ಪ್ರಾಧಿಕಾರದ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ೧೯೭೫ರಲ್ಲಿ ೧ ಲಕ್ಷ ಟನ್ ನಿರ್ವಹಿಸುತ್ತಿದ್ದ ನವ ಮಂಗಳೂರು ಬಂದರಿನ ಸಾಮರ್ಥ್ಯ ೨೦೨೪-೨೫ರಲ್ಲಿ ೪೬ ಮಿಲಿಯನ್ ಟನ್‌ಗೆ ಏರಿಕೆಯಾಗಿದೆ. ಇದು ಕೇಂದ್ರ ಸರ್ಕಾರದ ವಿಕಸಿತ ಭಾರತದ ದೂರದೃಷ್ಟಿಯನ್ನು ಪ್ರತಿಬಿಂಬಿಸುತ್ತದೆ ಎಂದರು. ದೇಶದ ಎಲ್ಲ ಬಂದರುಗಳಲ್ಲಿ ಒಟ್ಟಾರೆಯಾಗಿ ಪ್ರಸ್ತುತ ೨ ಸಾವಿರದ ೭೦೦ ಮಿಲಿಯನ್ ಮೆಟ್ರಿಕ್ ಟನ್ ಸರಕು ನಿರ್ವಹಿಸಲಾಗುತ್ತಿದೆ. ಬಂದರುಗಳ ತಾಂತ್ರಿಕತೆ ಅಭಿವೃದ್ಧಿ ಸೇರಿದಂತೆ ಸರ್ವ ಪ್ರಯತ್ನಗಳ ಮೂಲಕ ೨೦೪೭ರ ಹೊತ್ತಿಗೆ ಈ ಸಾಮರ್ಥ್ಯವನ್ನು ೧೦ ಸಾವಿರ ಮಿಲಿಯನ್ ಮೆಟ್ರಿಕ್ ಟನ್‌ಗೆ ಏರಿಸಲಾಗುವುದು. ಜತೆಗೆ ಹಡಗು ನಿರ್ಮಾಣದಲ್ಲಿ ಭಾರತ ೨೦೩೦ರ ವೇಳೆಗೆ ವಿಶ್ವದ ಅಗ್ರ ೧೦ರಲ್ಲಿ ಸ್ಥಾನ ಪಡೆಯಲಿದ್ದು, ೨೦೪೭ರ ವೇಳೆಗೆ ಅಗ್ರ-೫ರಲ್ಲಿ ಸ್ಥಾನ ಪಡೆಯಲಿದೆ ಎಂದು ಹೇಳಿದರು. ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಕಾಲಮಿತಿ ನಿಗದಿಗೊಳಿಸಿದ್ದು, ಗುರಿಯನ್ನೂ ಈಗಲೇ ನಿರ್ಧಾರ ಮಾಡಿರುವುದು ಸರ್ಕಾರದ ಹೆಗ್ಗಳಿಕೆ. ಪ್ರಧಾನಿಯವರ ಮುತುವರ್ಜಿಯಿಂದಾಗಿ ಭಾರತ ಈಗ ಜಗತ್ತಿನ ಶಕ್ತಿಶಾಲಿ ಹಾಗೂ ಪ್ರಭಾವಶಾಲಿ ದೇಶವಾಗಿ ಬೆಳೆದಿದೆ ಎಂದು ಸಚಿವರು ಹೇಳಿದರು.

ಧ್ವನಿ: ಸರ್ಬಾನಂದ್ ಸೋನೋವಾಲ್ ( ೩೦ ಸೆಕೆಂಡ್ಸ್)

<><><>

ಭಾರತದಲ್ಲಿ ಕಡಲು ವಲಯ ತ್ವರಿತ ಬೆಳವಣಿಗೆ ಕಾಣುತ್ತಿದ್ದು, ೨೦೩೦ರ ವೇಳೆಗೆ ನಮ್ಮ ದೇಶ 'ಅಗ್ರ ೧೦' ಹಡಗು ನಿರ್ಮಾಣ ರಾಷ್ಟ್ರಗಳಲ್ಲಿ ಒಂದಾಗಲಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಮಂಗಳೂರಿನಲ್ಲಿ ನವಮಂಗಳೂರು ಬಂದರು ಪ್ರಾಧಿಕಾರದ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿ,

ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ೨೦೪೭ರ ವೇಳೆಗೆ ಟಾಪ್-೫ ರಾಷ್ಟ್ರಗಳ ಪಟ್ಟಿಯಲ್ಲಿ ಇರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಪ್ರಧಾನಿ ಅವರ ಸಮರ್ಥ ನಾಯಕತ್ವ ಮತ್ತು ಬೆಂಬಲದಿಂದ ದೇಶದ ಹಡಗು ನಿರ್ಮಾಣ ಸಾಮರ್ಥ್ಯ ಸುಧಾರಿಸಿದೆ. ಸೇವಾ ಚಟುವಟಿಕೆಗಳ ಜತೆಗೆ ಅಭೂತಪೂರ್ವ ಎನ್ನುವಂತೆ ಉತ್ಪಾದನಾ ಸಾಮರ್ಥ್ಯವನ್ನೂ ವೃದ್ಧಿಸಿಕೊಂಡಿದೆ. ಭಾರತದ ರಫ್ತು ಹೆಚ್ಚಿಸುವಲ್ಲಿ ಬಂದರು ವಲಯದ ಪಾತ್ರ ಪ್ರಮುಖವಾಗಿದೆ. ದೇಶದಿಂದ ರಫ್ತು ಚಟುವಟಿಕೆಗಳನ್ನು ಸಕ್ರಿಯವಾಗಿ ಸುಧಾರಿಸಲು ಲಾಜಿಸ್ಟಿಕ್ಸ್ ವೆಚ್ಚ ತಗ್ಗಿಸಲು ಕೇಂದ್ರ ಸರ್ಕಾರ ಹೆಚ್ಚಿನ ಒತ್ತು ನೀಡಿದೆ ಎಂದು ಪ್ರತಿಪಾದಿಸಿದರು. ಪಶ್ಚಿಮ ಕರಾವಳಿಯ ನವ ಮಂಗಳೂರು ಬಂದರು ಕರ್ನಾಟಕದ ಪ್ರಮುಖ ಬಂದರು ಮತ್ತು ಭಾರತದ ೭ನೇ ಅತಿ ದೊಡ್ಡ ಬಂದರಾಗಿದೆ. ದೇಶದ ಆರ್ಥಿಕ ಅಭಿವೃದ್ಧಿಗೆ, ಸಮುದ್ರ ವಾಣಿಜ್ಯಕ್ಕೆ ಮತ್ತು ದಕ್ಷಿಣ ಭಾರತದ ಕೈಗಾರಿಕಾ ಪ್ರಗತಿಗೆ ಅನನ್ಯ ಕೊಡುಗೆ ನೀಡುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದರು.

<><><>

ರೈಲ್ವೆ ಮಂಡಳಿಯು ಎಲ್ಲಾ ವಲಯ ರೈಲ್ವೆಗಳಿಗೆ ಪ್ರಯಾಣದ ಸಮಯದಲ್ಲಿ ರೈಲುಗಳಿಂದ ತ್ಯಾಜ್ಯವನ್ನು ವ್ಯವಸ್ಥಿತವಾಗಿ ನಿರ್ವಹಿಸುವುದು ಮತ್ತು ವಿಲೇವಾರಿ ಮಾಡುವ ಬಗ್ಗೆ ವಿವರವಾದ ಸೂಚನೆಗಳನ್ನು ನೀಡಿದೆ.  ಈ ನಿರ್ದೇಶನವು ಸ್ವಚ್ಛತೆಯನ್ನು ಹೆಚ್ಚಿಸುವ ಮತ್ತು ಪ್ರಯಾಣಿಕರಿಗೆ ಹೆಚ್ಚು ಹಿತಕರವಾದ ಪ್ರಯಾಣದ ಅನುಭವವನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಈ ಜವಾಬ್ದಾರಿಗಳನ್ನು ಪರಿಣಾಮಕಾರಿಯಾಗಿ ಪೂರೈಸಲು ಮುಂಚೂಣಿಯ ಸಿಬ್ಬಂದಿಗೆ ವಲಯ ರೈಲ್ವೆಗಳು ಸಮರ್ಪಕವಾಗಿ ತರಬೇತಿ ನೀಡಬೇಕು ಮತ್ತು ಸಜ್ಜುಗೊಳಿಸಬೇಕು ಎಂದು ಮಂಡಳಿ ನಿರ್ದೇಶಿಸಿದೆ.

<><><>

ಮಾಲ್ಡೀವ್ಸ್ ಜೊತೆಗಿನ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸಲು ಮತ್ತು ಎರಡೂ ರಾಷ್ಟ್ರಗಳು ಮತ್ತು ಜನರ ನಡುವಿನ ಸಂಬಂಧವನ್ನು ಮತ್ತಷ್ಟು ವೃದ್ಧಿಸಲು ನಿರಂತರ ಸಹಕಾರ ನೀಡುವ ಭಾರತದ ಬದ್ಧತೆಯನ್ನು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಪುನರುಚ್ಚರಿಸಿದ್ದಾರೆ.  ನವದೆಹಲಿಯಲ್ಲಿ ನಿನ್ನೆ ಸ್ಮಾರ್ಟ್ ಸಿಟಿ ಮಿಷನ್ ಕುರಿತ ಸಾಮರ್ಥ್ಯ ವೃದ್ಧಿ ತರಬೇತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಮಾಲ್ಡೀವ್ಸ್ ಅಧಿಕಾರಿಗಳ ಸಾಮರ್ಥ್ಯ ವೃದ್ಧಿಗೆ ಅನುಕೂಲ ಮಾಡಿಕೊಡಲು ಮತ್ತು ಸಾರ್ವಜನಿಕ ನೀತಿ, ಆಡಳಿತ, ನವೋದ್ಯಮ ನೀತಿಗಳು, ಮೂಲಸೌಕರ್ಯ ಅಭಿವೃದ್ಧಿ ಮತ್ತಿತರ ಕ್ಷೇತ್ರಗಳಲ್ಲಿ ಜ್ಞಾನ ಮತ್ತು ಪರಿಣತಿಯನ್ನು ಹಂಚಿಕೊಳ್ಳಲು ಭಾರತ ಸಿದ್ಧವಾಗಿದೆ ಎಂದು

ಹೇಳಿದರು.  ಮಾಲ್ಡೀವ್ಸ್ ಅಧಿಕಾರಿಗಳ ಅಗತ್ಯಕ್ಕೆ ಅನುಗುಣವಾಗಿ ಪ್ರಮುಖ ವಲಯಗಳಲ್ಲಿ ಅಗತ್ಯ ಆಧಾರಿತ ಕಾರ್ಯಕ್ರಮಗಳನ್ನು ನಿರ್ವಹಿಸಲು ಭಾರತ ಬಯಸುತ್ತದೆ ಎಂದರು. ಇದೇ ವೇಳೆ ಸಚಿವರು ಮಾಲ್ಡೀವ್ಸ್ ಸಹವರ್ತಿ ಅಹ್ಮದ್ ಸಲೀಂ ನೇತೃತ್ವದ ೩೦ ಸದಸ್ಯರ ನಿಯೋಗದೊಂದಿಗೆ ಸಂವಾದ ನಡೆಸಿದರು ಎಂದು ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಸಚಿವಾಲಯ ತಿಳಿಸಿದೆ.

<><><>

ಕೋಲ್ಕೊತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ಇಂದಿನಿಂದ ಭಾರತ ಮತ್ತು ಪ್ರವಾಸಿ ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಎರಡು ಪಂದ್ಯಗಳ ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ಅರಂಭವಾಗಲಿದೆ. ಬೆಳಗ್ಗೆ ೯.೩೦ಕ್ಕೆ ಪಂದ್ಯ ಆರಂಭವಾಗಲಿದೆ. ಪ್ರಸ್ತುತ ಉಭಯ ತಂಡಗಳು ಬಹುತೇಕ ಎಲ್ಲಾ ವಿಭಾಗಗಳಲ್ಲಿ ಸಮಬಲ ಹೊಂದಿರುವ ಕಾರಣ ಉತ್ತಮ ಪೈಪೋಟಿ ನಿರೀಕ್ಷಿಸಬಹುದಾಗಿದೆ. ಶುಭಮನ್ ಗಿಲ್ ಭಾರತ ತಂಡವನ್ನು ಮುನ್ನಡೆಸಲಿದ್ದು, ಬ್ಯಾಟಿಂಗ್ ಮತ್ತು ಬೌಲಿಂಗ್ ಕ್ರಮಾಂಕ ಉತ್ತಮ ಲಯದಲ್ಲಿದೆ.  ಮತ್ತೊಂದೆಡೆ, ತೆಂಬ ಬವುಮಾ ನಾಯಕತ್ವದಲ್ಲಿರುವ ದಕ್ಷಿಣ ಆಫ್ರಿಕನ್ನರು ಸಹ ಭಾರತಕ್ಕೆ ಕಠಿಣ ಸವಾಲು ನೀಡಬಲ್ಲರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>

<><>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <><>